## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1089 |
| ಮಾನ್ಯ ಸದಸ್ಯರ ಹೆಸರು | ಡಾ: ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17-03-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುವ ಗುತ್ತಿಗೆ ಶುಶೂಷಾಧಿಕಾರಿಗಳ ಬೇಡಿಕೆಯ ಮನವಿ ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಾಧಿಕಾರಿಗಳ ಬೇಡಿಕೆಗಳ ಬಗ್ಗೆ ಪರಿಶೀಲನೆಯಲ್ಲಿದೆ. |
| ಆ) | ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸುಮಾರು 5000 ಗುತ್ತಿಗೆ ಶುಶೂಷಾಧಿಕಾರಿಗಳನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಈ ಯೋಜನೆಯಡಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಅಭಿಯಾನದ ಕಾರ್ಯಕ್ರಮಗಳ ಅನುಷ್ಠಾನಕ್ಕೆ ತೆಗೆದುಕೊಳ್ಳಲಾಗಿದೆ. ಅಭಿಯಾನ ಮುಕ್ತಾಯವಾದರೆ ಇವರ ನೇಮಕಾತಿಯು ಮುಕ್ತಾಯಗೊಳ್ಳುವ ಹಿನ್ನಲೆಯಲ್ಲಿ ಇವರುಗಳನ್ನು ರಾಜ್ಯ ಸರ್ಕಾರದಲ್ಲಿ ಜಾರಿಯಲ್ಲಿರುವ ಸೇವಾನಿಯಮಗಳನ್ವಯ ಖಾಯಂಗೊಳಿಸಲು ಅವಕಾಶವಿರುವುದಿಲ್ಲ. |
| ಇ) | ಇವರಲ್ಲಿ ಈಗಾಗಲೇ ಸುಮಾರು 15 ರಿಂದ 20 ವರ್ಷಕ್ಕೆ ಸೇವೆ ಸಲ್ಲಿಸಿ ನಿವೃತ್ತಿಯಾಗಲಿರುವ ಗುತ್ತಿಗೆ ಶುಶೂಷಾಧಿಕಾರಿಗಳಿಗೆ ಸರ್ಕಾರದ ವತಿಯಿಂದ ನೀಡುವ ಆರ್ಥಿಕ ಸೌಲಭ್ಯಗಳೇನು: | ರಾಷ್ಟ್ರೀಯ ಆರೋಗ್ಯ ಅಭಿಯಾನ ನಿಯಮಗಳಂತೆ ಗುತ್ತಿಗೆ ನೌಕರರ ಅವಧಿ ಮುಗಿದ ನಂತರ ಯಾವುದೇ ರೀತಿಯ ಆರ್ಥಿಕ ಸೌಲಭ್ಯಗಳನ್ನು ನೀಡಲು ಅವಕಾಶವಿರುವುದಿಲ್ಲ. |
| ಈ) | ಈಗಾಗಲೇ ಸುಮಾರು 15 ರಿಂದ 20 ವರ್ಷಗಳಿಂದ ಗುತ್ತಿಗೆ ನೌಕರರಾಗಿ ಕಾರ್ಯ ನಿರ್ವಹಿಸುತ್ತಿರುವ ಇವರಿಗೆ ಶುಶೂಷಾಧಿಕಾರಿಗಳ ನೇರ ನೇಮಕಾತಿಯಲ್ಲಿ ಕೃಪಾಂಕ ವಯೋಮಿತಿ ಸಡಿಲಿಕೆ ಅಂತಹ ವಿಶೇಷ ಸೌಲಭ್ಯ ನೀಡುವುದಕ್ಕೆ ಸರ್ಕಾರದ ನಿಲುವು ಏನು? | ಶುಶ್ರೂಷಾಧಿಕಾರಿ ಹುದ್ದೆಗಳ ಮುಂದಿನ ನೇಮಕಾತಿ ಸಮಯದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು. |

ಸಂಖ್ಯೆ: ಆಕುಕ 17 ಹೆಚ್‌ಪಿಸಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು